# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 899

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ.ನಮೋಶಿ

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 13-12-2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಶಕ್ತಿ ಯೋಜನೆಯಿಂದಾಗಿ ಬಸ್ ಗಳ ಕೊರತೆಯಿಂದ ಶಾಲಾ ಮಕ್ಕಳು ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಹಿನ್ನಡೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬಸ್ ಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು; | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಶಕ್ತಿ ಯೋಜನೆಯಿಂದಾಗಿ ಬಸ್‌ಗಳ ಕೊರತೆಯಿಂದ ಶಾಲಾ ಮಕ್ಕಳು ಶೈಕ್ಷಣಿಕ ಪ್ರವಾಸ ಕೈಗೊಳ್ಳಲು ಹಿನ್ನಡೆಯುಂಟಾಗುತ್ತಿರುವುದಾಗಿ ಈವರೆಗೆ ಯಾವುದೇ ದೂರು/ಆಕ್ಷೇಪಣೆಗಳು ಸ್ವೀಕೃತವಾಗಿರುವುದಿಲ್ಲ.<br><br>ಶಿಕ್ಷಣ ಇಲಾಖೆ/ ಶಾಲಾ ಕಾಲೇಜುಗಳಿಂದ ಬೇಡಿಕೆ/ಮನವಿ ಬಂದಿದ್ದು, ಸಂಸ್ಥೆಯಲ್ಲಿ ಲಭ್ಯವಿರುವ ವಾಹನಗಳನ್ನು ಬಳಸಿಕೊಂಡು ಬೇಡಿಕೆಗೆ ಅನುಸಾರವಾಗಿ ಸಂಬಂಧಪಟ್ಟ ಶಾಲೆಗಳ ಸಮನ್ವಯದೊಂದಿಗೆ ಶೈಕ್ಷಣಿಕ ಪ್ರವಾಸಕ್ಕಾಗಿ ಬಸ್‌ಗಳನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ. |
| ಆ. | ರಾಜ್ಯದಲ್ಲಿ ಪ್ರತಿದಿನ ಸಂಚರಿಸುತ್ತಿರುವ ಬಸ್ಸುಗಳ ಸಂಖ್ಯೆ ಎಷ್ಟು; ವೋಲ್ವೋ, ಎಸಿ ಹಾಗೂ ಸ್ಲೀಪರ್ ಬಸ್‌ಗಳ ಸಂಖ್ಯೆ ಎಷ್ಟು; (ನಿಗಮಗಳವಾರು ಮಾಹಿತಿ ನೀಡುವುದು) | ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಪ್ರತಿದಿನ ಸಂಚರಿಸುತ್ತಿರುವ ಬಸ್ಸುಗಳ ಸಂಖ್ಯೆ ಈ ಕೆಳಕಂಡಂತಿದೆ:-<br><br>**ನಿಗಮಗಳು** — **ಪ್ರತಿದಿನ ಸಂಚರಿಸುತ್ತಿರುವ ಬಸ್ಸುಗಳ**<br>ಕ.ರಾ.ರ.ಸಾ.ನಿಗಮ — 7574<br>ಬೆಂ.ಮ.ಸಾ.ಸಂಸ್ಥೆ — 6198<br>ವಾ.ಕ.ರ.ಸಾ.ಸಂಸ್ಥೆ — 4583<br>ಕ.ಕ.ರ.ಸಾ.ನಿಗಮ — 4854<br>**ಒಟ್ಟು** — **23209**<br><br>ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ ಪ್ರತಿದಿನ ಸಂಚರಿಸುತ್ತಿರುವ ವೋಲ್ವೊ, ಎಸಿ ಹಾಗೂ ಸ್ಲೀಪರ್ ಬಸ್‌ಗಳ ವಿವರ ಈ ಕೆಳಕಂಡಂತೆ ಇರುತ್ತದೆ: |

**ಕ.ರಾ.ರ.ಸಾ.ನಿಗಮ:**

| ಸಾರಿಗೆ ಸೇವೆ | ಬಸ್‌ಗಳ ಸಂಖ್ಯೆ |
|---|---|
| ನಗರ ಸಾರಿಗೆ (ಎ/ಸಿ) | 24 |
| ಐರಾವತ (ಎ/ಸಿ) | 80 |
| ಐರಾವತ ಕ್ಲಬ್ ಕ್ಲಾಸ್ (ಎ /ಸಿ, ಮಲ್ಟಿ-ಆಕ್ಸಲ್) | 209 |
| ಸ್ಲೀಪರ್ (ನಾನ್ ಎ/ಸಿ) | 150 |
| ಸ್ಲೀಪರ್ (ಎ/ಸಿ) | 84 |

**ಬೆಂ.ಮ.ಸಾ.ಸಂಸ್ಥೆ:**

ಸಂಸ್ಥೆಯಲ್ಲಿ ಪ್ರತಿದಿನ ಸಂಚರಿಸುತ್ತಿರುವ ಒಟ್ಟು 6198 ಬಸ್‌ಗಳಲ್ಲಿ ಹವಾನಿಯಂತ್ರಿತ ಮಾದರಿಯ 664 ವೋಲ್ವೋ ಹಾಗೂ 25 ಕರೋನಾ, ಒಟ್ಟು 689 ಬಸ್ಸುಗಳು ಸಂಚರಿಸುತ್ತಿರುತ್ತವೆ.

**ವಾ.ಕ.ರ.ಸಾ.ಸಂಸ್ಥೆ:**

| ಕ್ರ.ಸಂ | ಸೇವಾ ಮಾದರಿ | ಬಸ್ಸುಗಳ ಸಂಖ್ಯೆ |
|---|---|---|
| 1 | ವೋಲ್ವೋ | 36 |
| 2 | ಎಸಿ ಸ್ಲೀಪರ್ | 20 |
| 3 | ನಾನ್ ಎಸಿ ಸ್ಲೀಪರ್ | 62 |
| | ಒಟ್ಟು | 118 |

**ಕ.ಕ.ರ.ಸಾ.ನಿಗಮ:-**

| | | |
|---|---|---|
| 1 | ವೋಲ್ವೋ | 02 |
| 2 | ಹವಾನಿಯಂತ್ರಿತ ಸ್ಲೀಪರ್ | 17 |
| 3 | ಹವಾ ನಿಯಂತ್ರಣಾರಹಿತ ಸ್ಲೀಪರ್ | 115 |
| | **ಒಟ್ಟು** | **134** |

ಇ. ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಬಸ್‌ಗಳ ಬೇಡಿಕೆ ಹೆಚ್ಚಾಗುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಹೊಸ ಬಸ್‌ಗಳ ಖರೀದಿಗೆ ಸರ್ಕಾರ ನಿರ್ಧರಿಸಿದೆಯೇ; ಹಾಗಿದ್ದಲ್ಲಿ, ಎಷ್ಟು ಬಸ್‌ಗಳನ್ನು ಖರೀದಿಸಲಾಗುತ್ತಿದೆ? (ವಿವರ ನೀಡುವುದು)

ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಬಸ್‌ಗಳ ಬೇಡಿಕೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ವಾ.ಕ.ರಾ.ಸಂಸ್ಥೆ ಮತ್ತು ಕ.ಕ.ರಾ.ಸಾ.ನಿಗಮಗಳಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.

**ವಾ.ಕ.ರ.ಸಾ.ಸಂಸ್ಥೆ:**

ಸಂಸ್ಥೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

| | | |
|---|---|---|
| | | ➢ 50 ಗ್ರಾಮಾಂತರ ಸಾರಿಗೆ ವಾಹನಗಳನ್ನು ಖರೀದಿಸಲಾಗಿದೆ.<br>➢ ಗ್ರಾಮಾಂತರ ಸಾರಿಗೆಯ 285 ಹೊಸ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>➢ ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನ ಸುಮಾರು 375 ಸಂಖ್ಯೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>➢ ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ ಪ್ರಕ್ರಿಯೆ ಸಹ ಜಾರಿಯಲ್ಲಿರುತ್ತದೆ.<br>➢ 20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>**ಕ.ಕ.ರ.ಸಾ.ನಿಗಮ:-**<br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br><br>➢ ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>➢ ಪೂರ್ಣ ಕವಚ ನಿರ್ಮಿತ 93 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

ಸಂಖ್ಯೆ: ಟಿಡಿ 220 ಟಿಸಿಕ್ಯೂ 2023

**(ರಾಮಲಿಂಗಾ ರೆಡ್ಡಿ)**

ಸಾರಿಗೆ ಮತ್ತು ಮುಜರಾಯಿ ಸಚಿವರು